# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ:- 2021-22 ನೇ ಸಾಲಿನಲ್ಲಿ ವಿಶೇಷ ಅಭಿವೃದ್ಧಿ ಯೋಜನೆಯಡಿ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಹಾಸ್ಟೆಲ್ ಕಟ್ಟಡ ನಿರ್ಮಾಣದಡಿ ಅನುಮೋದನೆ ನೀಡಿರುವ ಬಗ್ಗೆ.

ಓದಲಾಗಿದೆ:-
1. ಅನಧಿಕೃತ ಟಿಪ್ಪಣಿ ಸಂಖ್ಯೆ: ಹಿಂವಕ 347 ಬಿಎಂಎಸ್ 2021, ದಿನಾಂಕ:07.06.2021.
2. ಯೋಜನೆ, ಕಾರ್ಯಕ್ರಮ ಸಂಯೋಜನೆ ಮತ್ತು ಸಾಂಖ್ಯಿಕ ಇಲಾಖೆ ಇವರ ಆದೇಶ ಸಂಖ್ಯೆ: ಪಿಡಿಎಸ್ 26 ಎಸ್‌ಡಿಪಿ 2021, ದಿನಾಂಕ: 15.07.2021.

******

**ಪ್ರಸ್ತಾವನೆ:-**

ಮೇಲೆ ಓದಲಾದ ಕ್ರಮ ಸಂಖ್ಯೆ(1) ಅನಧಿಕೃತ ಟಿಪ್ಪಣಿಯಲ್ಲಿ ಯೋಜನೆ, ಕಾರ್ಯಕ್ರಮ, ಸಂಯೋಜನೆ ಮತ್ತು ಸಾಂಖ್ಯಿಕ ಇಲಾಖೆ ಇವರ ಅರೆಸರ್ಕಾರಿ ಪತ್ರ ಸಂಖ್ಯೆ: ಪಿಡಿಎಸ್ 21 ಎಸ್‌ಡಿಪಿ 2021 ದಿನಾಂಕ:17.05.2021 ರ ಪತ್ರದನ್ವಯ 2021-22ನೇ ಸಾಲಿಗೆ ವಿಶೇಷ ಅಭಿವೃದ್ಧಿ ಯೋಜನೆಯಡಿ ಡಾ:ನಂಜುಂಡಪ್ಪ ವರದಿ ಆಧಾರದ ಮೇಲೆ ಹಿಂದುಳಿದ ತಾಲ್ಲೂಕುಗಳಲ್ಲಿ ನಿರ್ಮಿಸಲು ಉದ್ದೇಶಿಸಿರುವ ಮೆಟ್ರಿಕ್ ನಂತರದ ಬಾಲಕ/ಬಾಲಕಿಯರ ವಿದ್ಯಾರ್ಥಿ ನಿಲಯಗಳ ಕ್ರಿಯಾ ಯೋಜನೆ ಸಿದ್ದಪಡಿಸಿ, ಯೋಜನೆ, ಕಾರ್ಯಕ್ರಮ ಸಂಯೋಜನೆ ಮತ್ತು ಸಾಂಖ್ಯಿಕ ಇಲಾಖೆಗೆ ಸಲ್ಲಿಸಲಾಗಿತ್ತು.

ಮೇಲೆ ಓದಲಾದ ಕ್ರಮ ಸಂಖ್ಯೆ(2)ರಲ್ಲಿ ಯೋಜನೆ, ಕಾರ್ಯಕ್ರಮ, ಸಂಯೋಜನೆ ಮತ್ತು ಸಾಂಖ್ಯಿಕ ಇಲಾಖೆಯು ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯು ಸಲ್ಲಿಸಿದ ಕ್ರಿಯಾ ಯೋಜನೆಯನ್ನು ಯೋಜನಾ ಇಲಾಖೆ ಪರಿಶೀಲಿಸಿ, ವಿಶೇಷ ಅಭಿವೃದ್ಧಿ ಯೋಜನೆಯ ಮಾರ್ಗಸೂಚಿಗಳಿಗನುಗುಣವಾಗಿ ದೃಡಪಡಿಸಿಕೊಂಡು 2021-22ನೇ ಸಾಲಿನ ವಿಶೇಷ ಅಭಿವೃದ್ಧಿ ಯೋಜನೆಯಡಿ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಹಾಸ್ಟೆಲ್ ಕಟ್ಟಡ ನಿರ್ಮಾಣ ಲೆಕ್ಕಶೀರ್ಷಿಕೆ:4225-03-277-2-06-(133) ರಡಿ ರೂ.3762.00ಲಕ್ಷಗಳ ವಿಭಾಗವಾರು ಸಂಪನ್ಮೂಲ ಹಂಚಿಕೆ ಮಾಡಿ ಅನುಬಂಧ-1 ರಲ್ಲಿನ ಕಾಮಗಾರಿಗಳ ಕ್ರಿಯಾ ಯೋಜನೆಗೆ ಕೆಲವು ಷರತ್ತುಗಳೊಂದಿಗೆ ಅನುಮೋದನೆ ನೀಡಿರುತ್ತದೆ.

ಈ ಹಿನ್ನೆಲೆಯಲ್ಲಿ ಪ್ರಸ್ತಾವನೆಯನ್ನು ಪರಿಶೀಲಿಸಿ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ: ಬಿಸಿಡಬ್ಲ್ಯೂ 347 ಬಿಎಂಎಸ್ 2021, ಬೆಂಗಳೂರು, ದಿನಾಂಕ:30/08/2021**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, 2021-22 ನೇ ಸಾಲಿಗೆ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯು ವಿಶೇಷ ಅಭಿವೃದ್ಧಿ ಯೋಜನೆಯಡಿ ನಿರ್ಮಿಸಲು ಉದ್ದೇಶಿಸಿರುವ ಮೆಟ್ರಿಕ್ ನಂತರದ ಬಾಲಕ/ಬಾಲಕಿಯರ ವಿದ್ಯಾರ್ಥಿ ನಿಲಯಗಳ ಕ್ರಿಯಾ ಯೋಜನೆಗೆ, ಯೋಜನೆ, ಕಾರ್ಯಕ್ರಮ ಸಂಯೋಜನೆ ಮತ್ತು ಸಾಂಖ್ಯಿಕ ಇಲಾಖೆಯ ಸರ್ಕಾರದ ಆದೇಶ ಸಂಖ್ಯೆ:ಪಿಡಿಎಸ್ 26 ಎಸ್‌ಡಿಪಿ 2021 ದಿನಾಂಕ:15.07.2021ರ ಆದೇಶದ ಅನುಬಂಧ-1 ರಲ್ಲಿ ನಮೂದಿಸಿರುವ ವಿದ್ಯಾರ್ಥಿ ನಿಲಯಗಳ ಕಟ್ಟಡ ಕಾಮಗಾರಿಗಳನ್ನು ನಿಯಮಾನುಸಾರ ಕೈಗೊಳ್ಳಲು ಕಾರ್ಯನಿರ್ವಾಹಕ ನಿರ್ದೇಶಕರು, ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘ ಇವರಿಗೆ ಈ ಕೆಳಕಂಡ ಷರತ್ತಿಗೊಳಪಟ್ಟು ವಹಿಸಿ ಆದೇಶಿಸಿದೆ.

**ಷರತ್ತುಗಳು:**

1. ಕಾರ್ಯನಿರ್ವಾಹಕ ನಿರ್ದೇಶಕರು, ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘ ಇವರು ಅನುಬಂಧ-1 ರಲ್ಲಿ ನಮೂದಿಸಿರುವ ವಿದ್ಯಾರ್ಥಿ ನಿಲಯಗಳ ಕಟ್ಟಡ ಕಾಮಗಾರಿಗಳಿಗೆ ಅಂದಾಜು ಪಟ್ಟಿ ತಯಾರಿಸಿ ಈ ಆದೇಶದ ಒಂದು ತಿಂಗಳಿನೊಳಗೆ ಸಕ್ಷಮ ಪ್ರಾಧಿಕಾರಗಳಿಂದ ತಾಂತ್ರಿಕ ಮತ್ತು ಆಡಳಿತಾತ್ಮಕ ಅನುಮೋದನೆ ಪಡೆದು ಅನುಷ್ಠಾನಗೊಳಿಸುವುದು.
2. ಆಯುಕ್ತರು,ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ರವರು ಅನುಬಂಧ-1 ರಲ್ಲಿ ನಮೂದಿಸಿರುವ ವಿದ್ಯಾರ್ಥಿ ನಿಲಯಗಳ ಕಟ್ಟಡ ಕಾಮಗಾರಿಗಳಿಗೆ ಆವಶ್ಯ ಇರುವ ಜಾಗವನ್ನು ನಿಯಮಾನುಸಾರ ಅನುಷ್ಠಾನ ಸಂಸ್ಥೆಗೆ ನೀಡುವುದು.
3. ಕಾರ್ಯನಿರ್ವಾಹಕ ನಿರ್ದೇಶಕರು, ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘ ಇವರು ಅನುಬಂಧ-1 ರಲ್ಲಿ ನಮೂದಿಸಿರುವ ವಿದ್ಯಾರ್ಥಿ ನಿಲಯಗಳ ಕಟ್ಟಡ ಕಾಮಗಾರಿಗಳಿಗೆ ನಿಯಮಾನುಸಾರ ಕೆ.ಟಿ.ಪಿ.ಪಿ ಅಧಿನಿಯಮ-1999 & ನಿಯಮ 2000 ರ ಅನ್ವಯ ಟೆಂಡರ್ ಕರೆದು ಅನುಷ್ಠಾನಗೊಳಿಸುವುದು.
4. ಅನುಬಂಧ-1 ರಲ್ಲಿ ನಮೂದಿಸಿರುವ ವಿದ್ಯಾರ್ಥಿ ನಿಲಯಗಳ ಕಟ್ಟಡ ಕಾಮಗಾರಿಗಳ ಬದಲಾವಣೆಗೆ ಅವಕಾಶವಿರುವುದಿಲ್ಲ ಹಾಗೂ ನೀಡಿರುವ ಅನುದಾನವನ್ನು ಈ ಆದೇಶದಲ್ಲಿರುವ ಅನುಮೋದಿತ ಕಾಮಗಾರಿಯನ್ನು ಹೊರತುಪಡಿಸಿ ಬೇರೆ ಯಾವ ಉದ್ದೇಶಕ್ಕೆ ಬಳಕೆ ಮಾಡಲು ಅವಕಾಶವಿರುವುದಿಲ್ಲ.
5. ಕಾರ್ಯನಿರ್ವಾಹಕ ನಿರ್ದೇಶಕರು, ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘ ಇವರು ಯೋಜನೆಗೆ ಅನುಮೋದನೆ ನೀಡಿರುವ ಅಂದಾಜು ಮಿತಿಯಲ್ಲಿಯೇ(ಟೆಂಡರ್ ಪ್ರೀಮಿಯಂ ಸೇರಿ) ಅನುಷ್ಠಾನಗೊಳಿಸುವುದು.